ANNEXURE-II

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25ನೇ ಸಾಲಿಗೆ ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿನ ಸ್ನಾತಕೋತ್ತರ (ಎಂಡಿ/ಎಂಎಸ್) ಕೋರ್ಸಿನ ಸೀಟುಗಳಿಗೆ ಶುಲ್ಕ ನಿಗದಿಪಡಿಸುವ ಕುರಿತು

**ಉಲ್ಲೇಖ:** 2024-25ನೇ ಸಾಲಿನ ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಖಾಸಗಿ ಕಾಲೇಜುಗಳ ಸಂಘಗಳೊಂದಿಗೆ ಪರಸ್ಪರ ಒಡಂಬಡಿಕೆ ಮಾಡಿಕೊಳ್ಳುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 12-06-2024ರಂದು ನಡೆದ ಸಭಾ ನಡವಳಿಗಳು.

******

**ಪ್ರಸ್ತಾವನೆ:**

2024-25ನೇ ಸಾಲಿನ ಸ್ನಾತಕೋತ್ತರ ವೈದ್ಯಕೀಯ ಕೋರ್ಸು (ಎಂಡಿ/ಎಂಎಸ್)ಗಳ ಸೀಟು ಹಂಚಿಕೆ & ಶುಲ್ಕ ನಿಗಧಿಗೆ ಸಂಬಂಧಿಸಿದಂತೆ ಸರ್ಕಾರವು ರಾಜ್ಯದ ಖಾಸಗಿ ಕಾಲೇಜುಗಳ ಸಂಘಗಳಾದ ಕರ್ನಾಟಕ ವೃತ್ತಿಪರ ಕಾಲೇಜುಗಳ ಪ್ರತಿಷ್ಠಾನ (KPCF), ಕರ್ನಾಟಕ ಅಲ್ಪಸಂಖ್ಯಾತರ ವೃತ್ತಿಪರ ಕಾಲೇಜುಗಳ ಸಂಘ (AMPCK) ಹಾಗೂ ಕರ್ನಾಟಕ ಧಾರ್ಮಿಕ ಮತ್ತು ಭಾಷಾ ಅಲ್ಪಸಂಖ್ಯಾತ ಕಾಲೇಜುಗಳ ಸಂಘ (KRLMPCA)ಗಳೊಂದಿಗೆ ಪರಸ್ಪರ ಒಪ್ಪಂದದ ಒಡಂಬಡಿಕೆಯನ್ನು ಮಾಡಿಕೊಳ್ಳಬೇಕಾಗಿದೆ. ಮೇಲೆ ಓದಲಾದ ನಡವಳಿಯಲ್ಲಿ 2024-25ನೇ ಸಾಲಿನ ಸ್ನಾತಕ ಮತ್ತು ಸ್ನಾತಕೋತ್ತರ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಖಾಸಗಿ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕಾಲೇಜುಗಳ ಸಂಘಗಳೊಂದಿಗೆ ಪರಸ್ಪರ ಒಡಂಬಡಿಕೆ ಮಾಡಿಕೊಳ್ಳುವ ಕುರಿತು ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:12-06-2024ರಂದು ನಡೆದ ಸಭೆಯಲ್ಲಿ, ಖಾಸಗಿ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕಾಲೇಜುಗಳ ಸಂಘಗಳು ಶುಲ್ಕ ಹೆಚ್ಚಳ ಹಾಗೂ ಇನ್ನಿತರೆ ಕೆಲವು ಬೇಡಿಕೆಗಳನ್ನು ಸಲ್ಲಿಸಿರುತ್ತಾರೆ.

ಅದರಂತೆ, ರಾಜ್ಯದ ಖಾಸಗಿ ಕಾಲೇಜುಗಳ ಸಂಘಗಳಾದ KPCF, KRLMPCA & AMPCK ರವರು ಸಲ್ಲಿಸಿರುವ ಬೇಡಿಕೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು 2024-25ನೇ ಸಾಲಿನ ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿಪರ ಕಾಲೇಜುಗಳ ಪ್ರತಿಷ್ಠಾನ (KPCF), ಕರ್ನಾಟಕ ಅಲ್ಪಸಂಖ್ಯಾತರ ವೃತ್ತಿಪರ ಕಾಲೇಜುಗಳ ಸಂಘ (AMPCK) ಹಾಗೂ ಕರ್ನಾಟಕ ಧಾರ್ಮಿಕ ಮತ್ತು ಭಾಷಾ ಅಲ್ಪಸಂಖ್ಯಾತ ಕಾಲೇಜುಗಳ ಸಂಘ(KRLMPCA)ರವರು ಸಹಿ ಮಾಡಿ ಸರ್ಕಾರಕ್ಕೆ ಸಲ್ಲಿಸಿರುವ ಪರಸ್ಪರ ಒಡಂಬಡಿಕೆಯಂತೆ ಸರ್ಕಾರಿ/ಖಾಸಗಿ ಕೋಟಾದ ಸೀಟುಗಳಿಗೆ ಅನ್ವಯಿಸುವಂತೆ ಶೇ.10ರಷ್ಟು ಪ್ರವೇಶ ಶುಲ್ಕವನ್ನು ಹೆಚ್ಚಿಸಿ ಸ್ನಾತಕೋತ್ತರ ವೈದ್ಯಕೀಯ ಕೋರ್ಸ್ ಸೀಟುಗಳಿಗೆ ಈ ಕೆಳಕಂಡ ಕೋಷ್ಟಕದಲ್ಲಿ ನಮೂದಿಸಿರುವಂತೆ ಶುಲ್ಕವನ್ನು ನಿಗಧಿಪಡಿಸಲು ಕೋರಿರುತ್ತಾರೆ.

| ಸ್ನಾತಕೋತ್ತರ ವೈದ್ಯಕೀಯ ಪದವಿ (ಎಂ.ಡಿ/ಎಂ.ಎಸ್) | | | | | |
|---|---|---|---|---|---|
| ಸಂಖ್ಯೆ | ಕೋರ್ಸ್‌ಗಳ ವಿವರ | ಖಾಸಗಿ ಕೋಟಾದಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ | | ಸರ್ಕಾರಿ ಕೋಟಾದಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ | |
| | | 2023-24ನೇ ಸಾಲಿಗೆ ನಿಗಧಿಪಡಿಸಿದ್ದ ಶುಲ್ಕ | 2024-25ನೇ ಸಾಲಿಗೆ ನಿಗಧಿಪಡಿಸಬಹುದಾದ ಶುಲ್ಕ | 2023-24ನೇ ಸಾಲಿಗೆ ನಿಗಧಿಪಡಿಸಿದ್ದ ಶುಲ್ಕ | 2024-25ನೇ ಸಾಲಿಗೆ ನಿಗಧಿಪಡಿಸಬಹುದಾದ ಶುಲ್ಕ |
| 1 | ಕ್ಲಿನಿಕಲ್ | ರೂ.12,48,176/- | ರೂ.13,72,994/- | ರೂ.6,98,280/- | ರೂ.7,68,108/- |
| 2 | ಪ್ಯಾರಾ ಕ್ಲಿನಿಕಲ್ | ರೂ.3,12,048 /- | ರೂ.3,43,253/- | ರೂ.1,74,570/- | ರೂ.1,92,027/- |
| 3 | ಪ್ರೀ ಕ್ಲಿನಿಕಲ್ | ರೂ.1,56,971 /- | ರೂ.1,72,668/- | ರೂ.87,286/- | ರೂ.96,015/- |

2024-25ನೇ ಸಾಲಿಗೆ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿ ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳ ಸರ್ಕಾರಿ ಕೋಟಾದ ಸೀಟುಗಳಿಗೆ ಪ್ರವೇಶ ಶುಲ್ಕವನ್ನು ಶೇ.10ರಷ್ಟು ಹೆಚ್ಚಳ ಮಾಡಿದಲ್ಲಿ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕದ ವಿವರ:

| ಸ್ನಾತಕೋತ್ತರ ವೈದ್ಯಕೀಯ ಕೋರ್ಸ್‌ಗಳು (ಎಂ.ಡಿ/ಎಂ.ಎಸ್) | | | |
|---|---|---|---|
| ಸಂಖ್ಯೆ | ಕೋರ್ಸ್‌ಗಳ ವಿವರ | 2023-24ನೇ ಸಾಲಿಗೆ ನಿಗಧಿಪಡಿಸಿದ್ದ ಶುಲ್ಕ | 2024-25ನೇ ಸಾಲಿಗೆ ನಿಗಧಿಪಡಿಸಬಹುದಾದ ಶುಲ್ಕ |
| 1. | ಕ್ಲಿನಿಕಲ್ | ರೂ.1,00,000/- | ರೂ.1,10,000/- |
| 2. | ಪ್ಯಾರಾ ಕ್ಲಿನಿಕಲ್ | ರೂ.50,000/- | ರೂ.55,000/- |
| 3. | ಪ್ರೀ ಕ್ಲಿನಿಕಲ್ | ರೂ.25,000/- | ರೂ.27,500/- |

ಡೀಮ್ಡ್ ಮತ್ತು ಖಾಸಗಿ ವಿಶ್ವವಿದ್ಯಾಲಯದಡಿ ಬರುವ ಎಲ್ಲಾ ವೈದ್ಯಕೀಯ ಕಾಲೇಜುಗಳಲ್ಲಿ ಸರ್ಕಾರಿ ಕೋಟಾದಡಿ ಆಯ್ಕೆಯಾಗುವ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕದ ವಿವರ:

| ಸ್ನಾತಕೋತ್ತರ ವೈದ್ಯಕೀಯ ಕೋರ್ಸ್‌ಗಳು (ಎಂ.ಡಿ/ಎಂ.ಎಸ್) | | | |
|---|---|---|---|
| ಸಂಖ್ಯೆ | ಕೋರ್ಸ್‌ಗಳ ವಿವರ | 2023-24ನೇ ಸಾಲಿಗೆ ನಿಗಧಿಪಡಿಸಿದ್ದ ಶುಲ್ಕ | 2024-25ನೇ ಸಾಲಿಗೆ ನಿಗಧಿಪಡಿಸಬಹುದಾದ ಶುಲ್ಕ |
| 1 | ಕ್ಲಿನಿಕಲ್ | ರೂ.6,98,280/- | ರೂ.7,68,108/- |
| 2 | ಪ್ಯಾರಾ ಕ್ಲಿನಿಕಲ್ | ರೂ.1,74,570/- | ರೂ.1,92,027/- |
| 3 | ಪ್ರೀ ಕ್ಲಿನಿಕಲ್ | ರೂ.87,286/- | ರೂ.96,015/- |

ಮೇಲೆ ನಮೂದಿಸಿರುವ ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, 2024-25ನೇ ಸಾಲಿಗೆ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳು, ರಾಜ್ಯದಲ್ಲಿನ KPCF, KRLMPCA & AMPCK ಸಂಘದ ಕಾಲೇಜುಗಳಲ್ಲಿನ ಖಾಸಗಿ ಸ್ನಾತಕೋತ್ತರ ವೈದ್ಯಕೀಯ ಕೋರ್ಸ್ ಸೀಟುಗಳು ಹಾಗೂ ರಾಜ್ಯದ ಡೀಮ್ಡ್ ವಿಶ್ವವಿದ್ಯಾಲಯ ಮತ್ತು ಖಾಸಗಿ ವಿಶ್ವವಿದ್ಯಾಲಯದಡಿ ಬರುವ ವೈದ್ಯಕೀಯ ಕಾಲೇಜುಗಳಲ್ಲಿ ಪ್ರವೇಶ ಶುಲ್ಕವನ್ನು ಶೇ.10ರಷ್ಟು ಹೆಚ್ಚಳ ಮಾಡಿ

ಮೇಲಿನ ಕೋಷ್ಟಕದಂತೆ ಪ್ರವೇಶಾತಿ ಶುಲ್ಕವನ್ನು ನಿಗದಿಪಡಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 112 ಆರ್‌ಜಿಯು 2024,**
**ದಿನಾಂಕ: 16-11-2024**

2024-25ನೇ ಸಾಲಿನ ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳಿಗೆ ಸಂಬಂಧಿಸಿದಂತೆ, ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳು, ಕರ್ನಾಟಕ ವೃತ್ತಿಪರ ಕಾಲೇಜುಗಳ ಪ್ರತಿಷ್ಠಾನ (KPCF), ಕರ್ನಾಟಕ ಅಲ್ಪಸಂಖ್ಯಾತರ ವೃತ್ತಿಪರ ಕಾಲೇಜುಗಳ ಸಂಘ (AMPCK) ಹಾಗೂ ಕರ್ನಾಟಕ ಧಾರ್ಮಿಕ ಮತ್ತು ಭಾಷಾ ಅಲ್ಪಸಂಖ್ಯಾತ ಕಾಲೇಜುಗಳ ಸಂಘದ (KRLMPCA) ಅಡಿಯಲ್ಲಿ ಬರುವ ಎಲ್ಲಾ ಕಾಲೇಜುಗಳು ಹಾಗೂ ರಾಜ್ಯದ ಡೀಮ್ಡ್ ವಿಶ್ವವಿದ್ಯಾಲಯ ಮತ್ತು ಖಾಸಗಿ ವಿಶ್ವವಿದ್ಯಾಲಯದಡಿ ಬರುವ ವೈದ್ಯಕೀಯ ಕಾಲೇಜುಗಳಲ್ಲಿ 2024-25ನೇ ಸಾಲಿಗೆ ಪ್ರವೇಶ ಶುಲ್ಕವನ್ನು ಶೇ.10ರಷ್ಟು ಹೆಚ್ಚಳ ಮಾಡಿ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಲಾಗಿದೆ.

ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿ ಸ್ನಾತಕೋತ್ತರ ವೈದ್ಯಕೀಯ ಕೋರ್ಸು(ಎಂಡಿ/ಎಂಎಸ್)ಗಳಿಗೆ 2024-25ನೇ ಸಾಲಿಗೆ ಪ್ರವೇಶ ಶುಲ್ಕವನ್ನು ಶೇ.10ರಷ್ಟು ಹೆಚ್ಚಿಸಿ ಈ ಕೆಳಕಂಡಂತೆ ನಿಗಧಿಪಡಿಸಲಾಗಿದೆ.

| ಸ್ನಾತಕೋತ್ತರ ವೈದ್ಯಕೀಯ ಕೋರ್ಸ್(ಎಂ.ಡಿ/ಎಂ.ಎಸ್)ಗಳು | | | |
|---|---|---|---|
| ಸಂಖ್ಯೆ | ಕೋರ್ಸ್‌ಗಳ ವಿವರ | 2023-24ನೇ ಸಾಲಿಗೆ ನಿಗಧಿಪಡಿಸಿದ್ದ ಶುಲ್ಕ | 2024-25ನೇ ಸಾಲಿಗೆ ನಿಗಧಿಪಡಿಸಲಾದ ಶುಲ್ಕ |
| 1. | ಕ್ಲಿನಿಕಲ್ | ರೂ.1,00,000/- | ರೂ.1,10,000/- |
| 2. | ಪ್ಯಾರಾ ಕ್ಲಿನಿಕಲ್ | ರೂ.50,000/- | ರೂ.55,000/- |
| 3. | ಪ್ರೀ ಕ್ಲಿನಿಕಲ್ | ರೂ.25,000/- | ರೂ.27,500/- |

ರಾಜ್ಯದಲ್ಲಿನ KPCF, KRLMPCA & AMPCK ಸಂಘಗಳಡಿಯಲ್ಲಿ ಬರುವ ಎಲ್ಲಾ ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿನ ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳ ಸೀಟುಗಳಿಗೆ 2024-25ನೇ ಸಾಲಿಗೆ ಪ್ರವೇಶ ಶುಲ್ಕವನ್ನು ಶೇ.10ರಷ್ಟು ಹೆಚ್ಚಿಸಿ ನಿಗಧಿಪಡಿಸಲಾದ ಶುಲ್ಕದ ವಿವರ:

| ಸ್ನಾತಕೋತ್ತರ ವೈದ್ಯಕೀಯ (ಎಂ.ಡಿ/ಎಂ.ಎಸ್) ಪದವಿ | | | | | |
|---|---|---|---|---|---|
| ಸಂಖ್ಯೆ | ಕೋರ್ಸ್‌ಗಳ ವಿವರ | ಖಾಸಗಿ ಕೋಟಾದಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ | | ಸರ್ಕಾರಿ ಕೋಟಾದಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ | |
| | | 2023-24ನೇ ಸಾಲಿಗೆ ನಿಗಧಿಪಡಿಸಿದ್ದ ಶುಲ್ಕ | 2024-25ನೇ ಸಾಲಿಗೆ ನಿಗಧಿಪಡಿಸಲಾದ ಶುಲ್ಕ | 2023-24ನೇ ಸಾಲಿಗೆ ನಿಗಧಿಪಡಿಸಿದ್ದ ಶುಲ್ಕ | 2024-25ನೇ ಸಾಲಿಗೆ ನಿಗಧಿಪಡಿಸಲಾದ ಶುಲ್ಕ |
| 1. | ಕ್ಲಿನಿಕಲ್ | ರೂ.12,48,176/- | ರೂ.13,72,994/- | ರೂ.6,98,280/- | ರೂ.7,68,108/- |
| 2. | ಪ್ಯಾರಾ ಕ್ಲಿನಿಕಲ್ | ರೂ.3,12,048 /- | ರೂ.3,43,253/- | ರೂ.1,74,570/- | ರೂ.1,92,027/- |
| 3. | ಪ್ರೀ ಕ್ಲಿನಿಕಲ್ | ರೂ.1,56,971 /- | ರೂ.1,72,668/- | ರೂ.87,286/- | ರೂ.96,015/- |

ರಾಜ್ಯದಲ್ಲಿನ ಡೀಮ್ಡ್ ವಿಶ್ವವಿದ್ಯಾನಿಲಯ ಮತ್ತು ಖಾಸಗಿ ವಿಶ್ವವಿದ್ಯಾಲಯದಡಿ ಬರುವ ವೈದ್ಯಕೀಯ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸ್ನಾತಕೋತ್ತರ ಕೋರ್ಸ್ರ್(ಎಂ.ಡಿ/ಎಂ.ಎಸ್)ಗಳ ಸೀಟುಗಳಿಗೆ 2024-25ನೇ ಸಾಲಿಗೆ ಪ್ರವೇಶ ಶುಲ್ಕವನ್ನು ಶೇ.10ರಷ್ಟು ಹೆಚ್ಚಿಸಿ ನಿಗಧಿಪಡಿಸಲಾದ ಶುಲ್ಕದ ವಿವರ:

| ಸ್ನಾತಕೋತ್ತರ ವೈದ್ಯಕೀಯ ಕೋರ್ಸ್(ಎಂ.ಡಿ/ಎಂ.ಎಸ್ & | | | |
|---|---|---|---|
| **ಸಂಖ್ಯೆ** | **ಕೋರ್ಸ್‌ಗಳ ವಿವರ** | **2023-24ನೇ ಸಾಲಿಗೆ ನಿಗಧಿಪಡಿಸಿದ ಶುಲ್ಕ** | **2024-25ನೇ ಸಾಲಿಗೆ ನಿಗಧಿಪಡಿಸಿದ ಶುಲ್ಕ** |
| 1. | ಕ್ಲಿನಿಕಲ್ | ರೂ.6,98,280/- | ರೂ.7,68,108/- |
| 2. | ಪ್ಯಾರಾ ಕ್ಲಿನಿಕಲ್ | ರೂ.1,74,570/- | ರೂ.1,92,027/- |
| 3. | ಪ್ರೀ ಕ್ಲಿನಿಕಲ್ | ರೂ.87,286/- | ರೂ.96,015/- |

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/11/2024

**(ಆರ್.ಮಂಜುನಾಥ)**
ಸರ್ಕಾರದ ಅಧೀನ ಕಾರ್ಯದರ್ಶಿ-3,
**ವೈದ್ಯಕೀಯ ಶಿಕ್ಷಣ ಇಲಾಖೆ**

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು -560001.
2. ಪ್ರಧಾನ ಮಹಾಲೇಖಪಾಲರು (ಜಿ&ಇ&ಆರ್ಎಸ್ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು -560001.
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-560012.
5. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು-560041.
6. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿ.ಎಂ.ಸಿ & ಆರ್.ಐ. ಹಳೆಯ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು-02.
7. ಅಧ್ಯಕ್ಷರು/ಕಾರ್ಯದರ್ಶಿ, ಕೆ.ಪಿ.ಸಿ.ಎಫ್(ಕಾಮೆಡ್-ಕೆ), ನಂ.132, 2ನೇ ಮಹಡಿ, 17ನೇ ಅಡ್ಡರಸ್ತೆ, 17ನೇ ಮುಖ್ಯರಸ್ತೆ, ಮಲ್ಲೇಶ್ವರಂ, ಬೆಂಗಳೂರು-560055.
8. ಅಧ್ಯಕ್ಷರು/ಕಾರ್ಯದರ್ಶಿ, ಕರ್ನಾಟಕ ರಾಜ್ಯ ಧಾರ್ಮಿಕ ಹಾಗೂ ಭಾಷಾ ಅಲ್ಪಸಂಖ್ಯಾತ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಒಕ್ಕೂಟ, (ಕೆ.ಆರ್.ಎಲ್.ಪಿ.ಸಿ.ಎ)

ನಂ.143, ಸೂರ್ಯಮುಖಿ ಅಪಾರ್ಟ್‌ಮೆಂಟ್, 4ನೇ ಮಹಡಿ, ವಿಠ್ಠಲ್ ಮಲ್ಯ ರಸ್ತೆ, ಬೆಂಗಳೂರು.

9. ಅಧ್ಯಕ್ಷರು/ಕಾರ್ಯದರ್ಶಿ, ಕರ್ನಾಟಕ ಅಲ್ಪಸಂಖ್ಯಾತ ವೃತ್ತಿಪರ ಕಾಲೇಜುಗಳ ಸಂಘ(ಎ.ಎಂ.ಪಿ.ಸಿ.ಕೆ), ಯೂನಿಟ್ ನಂ.205, ಲಕ್ಷ್ಮಿ ಅಪಾರ್ಟ್‌ಮೆಂಟ್ಸ್, ನಂ.06, ಕಾರ್ನ್‌ವೆಲ್ ರಸ್ತೆ, ಲ್ಯಾಂಗ್‌ಫೋರ್ಡ್ ಗಾರ್ಡನ್, ರಿಚ್ಮಂಡ್ ಟೌನ್, ಬೆಂಗಳೂರು-560001.
10. ಸಂಬಂಧಿಸಿದ ಖಾಸಗಿ ವೈದ್ಯಕೀಯ ಕಾಲೇಜುಗಳು, ಡೀಮ್ಡ್ ವಿಶ್ವವಿದ್ಯಾಲಯಗಳು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ಮತ್ತು ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ (ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರ ಮುಖಾಂತರ)

**ಪ್ರತಿಯನ್ನು ಮಾಹಿತಿಗಾಗಿ:-**

1. ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.